



ಅರುಣ ಪಿ. ಭಟ್ಟ

## ವಾರಭವಿಷ್ಯ 25.11.2021ರಿಂದ 01.12.2021ರವರೆಗೆ




ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರವಾಗುತ್ತವೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಏರುಪೇರಾಗಬಹುದು. ಶುಭದಿನ 28. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೃತ್ತಿಪರರಿಗೆ ಉತ್ತಮ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ವಿವಿಧ ಬಗೆಯಲ್ಲಿ ಯಶಸ್ಸು ದೊರೆಯಲಿದೆ. ಅಧಿಕಾರದಲ್ಲಿ ಇರುವವರು ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಿದ್ದಾರೆ. ಪೋಷಕರು ನಿಮ್ಮ ಪ್ರಗತಿಯಿಂದಾಗಿ ಸಂತೋಷ ಪಡಲಿದ್ದಾರೆ. ನಿರ್ಮಾಣ ಅಥವಾ ನವೀಕರಣ ಕೆಲಸಗಳನ್ನು ಕೈಗೆತ್ತಿಕೊಳ್ಳುವ ಸಾಧ್ಯತೆ ಇದೆ. ಶುಭದಿನ 30. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹೊಸದಾಗಿ ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಸ್ಪರ್ಧೆ, ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಸೋದರ ಸೋದರಿಯರ ಜತೆಗೆ ಒತ್ತಡದ ಸನ್ನಿವೇಶಗಳನ್ನು ಎದುರಿಸಬೇಕಾಗುತ್ತದೆ. ದೇವತಾ ಕಾರ್ಯಗಳನ್ನು ಆಯೋಜನೆ ಮಾಡಲಿದ್ದೀರಿ. ಶುಭದಿನ 29. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ ಪಡೆಯುವ ಅವಕಾಶ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಸಾಮಾಜಿಕವಾಗಿ ನಿಮ್ಮ ಶ್ರಮ ಹಾಗೂ ದುಡಿಮೆಗೆ ಮೆಚ್ಚುಗೆ, ಮನ್ನಣೆ ದೊರೆಯಲಿದೆ. ಶುಭದಿನ 28. ಕಾಲ ಭೈರವನ ಸೇವೆ ಮಾಡಿರಿ.




ಈ ವಾರ ಉಲ್ಲಾಸಿತವಾಗಿ ಸಮಯ ಕಳೆಯಲಿದೆ. ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಇದರಿಂದ ಉತ್ಸಾಹ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 27. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ಮಾರ್ಕೆಟಿಂಗ್ ವಿಭಾಗದಲ್ಲಿ ಇರುವವರಿಗೆ ಕೆಲಸಗಳು ಅಂದುಕೊಂಡ ವೇಗದಲ್ಲಿ ಸಾಗುವುದಿಲ್ಲ. ಈ ಸಂಬಂಧ ಹಿರಿಯ ಅಧಿಕಾರಿಗಳ ಜತೆಗೆ ಚರ್ಚೆ ನಡೆಸುವ ಸಾಧ್ಯತೆ ಇದೆ. ವಿದೇಶ ವ್ಯವಹಾರ, ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಏರುಪೇರಾಗಲಿದೆ. ಶುಭದಿನ 29. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಸ್ಪರ್ಧಾತ್ಮಕ, ಕ್ರೀಡಾ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಯಶಸ್ಸು ಪಡೆಯುವ ಯೋಗ ಇದೆ. ಆರೋಗ್ಯವು ಉತ್ತಮವಾಗಿ ಇರುವುದರಿಂದ ಉತ್ಸಾಹದಿಂದ ಕಾಣಿಸಿಕೊಳ್ಳಲಿದ್ದೀರಿ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಶುಭದಿನ 28. ಲಿಂಗಾಷ್ಟಕ ಓದಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಕಾಣುವ ಸಮಯ ಇದು. ಉತ್ಪಾದನೆ, ಕ್ರೀಡೆ ಅಥವಾ ಸೇವಾ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಪ್ರಗತಿಗೆ ಹಲವು ಅವಕಾಶಗಳು ದೊರೆಯಲಿವೆ. ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಸೇವೆ ಕಾಯಂ ಆಗುವ ಅಥವಾ ಗುತ್ತಿಗೆ ವಿಸ್ತರಣೆ ಆಗುವ ಶುಭ ಸುದ್ದಿ ದೊರೆಯಲಿದೆ. ಶುಭದಿನ 29. ಹನುಮಾನ್ ಚಾಲಿಸ್ ಓದಿರಿ.




ಮೆಚ್ಚುಗೆ, ಬಡ್ತಿ ದೊರೆಯುವ ಸಮಯ ಇದು. ಸಮಾಜ ಸೇವಾ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಮನರಂಜನೆ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸಲು ಬಯಸುವವರಿಗೆ ಅವಕಾಶ ದೊರೆಯಲಿದೆ. ಕೆಲ ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ 28. ನವದುರ್ಗಾ ಆರಾಧನೆ ಮಾಡಿರಿ.




ಪಿತ್ರಾರ್ಜಿತವಾದ ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ರೀತಿಯಲ್ಲಿ ಅವಕಾಶಗಳು ನಿಮಗೆ ದೊರೆಯಲಿವೆ. ರಾಜಕಾರಣ ಹಾಗೂ ನಾಯಕತ್ವ ಸ್ಥಾನದಲ್ಲಿ ಇರುವವರಿಗೆ ಇನ್ನಷ್ಟು ಪ್ರಾಮುಖ್ಯ ದೊರೆಯಲಿದೆ. ಶುಭದಿನ 26. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಪ್ರೀತಿಪಾತ್ರರ ಜತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ನಿಮ್ಮ ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ವ್ಯವಹಾರ ಉದ್ಯಮದ ವಿಚಾರವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 27. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರವಾಗಿ ತೀರ್ಪು ಬರುವ ಸಾಧ್ಯತೆಗಳು ಹೆಚ್ಚಿವೆ. ಬಹಳ ಕಾಲದಿಂದ ಬಾಕಿ ಉಳಿದಿದ್ದ ಕೆಲಸಕ್ಕೆ ಸಂಬಂಧಿಸಿದ ನಿರ್ಧಾರ, ಅನುಷ್ಠಾನ ಆಗಲಿದೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ ಬೆಂಬಲ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ಶುಭದಿನ 26. ವಿಷ್ಣು ಸಹಸ್ರನಾಮ ಪಠಿಸಿರಿ.